# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಹೊಸದಾಗಿ ಜಿಲ್ಲೆಯಾಗಿ ಸೃಜನೆಗೊಂಡ ವಿಜಯನಗರ ಜಿಲ್ಲೆಯ ಜಿಲ್ಲಾ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಯವರ ವೇತನ, ವೈದ್ಯಕೀಯ ವೆಚ್ಚ ಮರುಪಾವತಿ, ಹೊರಗುತ್ತಿಗೆ ಸಿಬ್ಬಂದಿಯವರ ಸಂಭಾವನೆ ಮತ್ತು ಕಛೇರಿ ವೆಚ್ಚಕ್ಕಾಗಿ ಅನುದಾನವನ್ನು ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸುತ್ತೋಲೆ ಸಂಖ್ಯೆ: ಆಇ 01 ಜಿಪಅ 2014 ದಿನಾಂಕ:1.2.2014

2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಗ್ರಾಅಪ 06 ಎಎಫ್ಎನ್ 2019 ದಿನಾಂಕ:14.12.2021

**ಪ್ರಸ್ತಾವನೆ:**

ಹೊಸದಾಗಿ ಜಿಲ್ಲೆಯಾಗಿ ಸೃಜನೆಗೊಂಡ ವಿಜಯನಗರ ಜಿಲ್ಲೆಯ ಜಿಲ್ಲಾ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಯವರ ವೇತನ, ವೈದ್ಯಕೀಯ ವೆಚ್ಚ ಮರುಪಾವತಿಗಾಗಿ, ವೇತನೇತರ ವೆಚ್ಚಕ್ಕಾಗಿ ಹಾಗೂ ತೆರವಾಗಿರುವ ಹುದ್ದೆಗೆದುರಾಗಿ ಹೊರಗುತ್ತಿಗೆ ಆಧಾರದ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯವರ ಸಂಭಾವನೆಗಾಗಿ ಲೆಕ್ಕ ಶೀರ್ಷಿಕೆ 2515-00-101-0-28-005, 021, 090 ಮತ್ತು 034ರಡಿ ಅನುಕ್ರಮವಾಗಿ ರೂ.20.00ಲಕ್ಷ, ರೂ.25.00ಲಕ್ಷ, ರೂ.14.00ಲಕ್ಷ ಮತ್ತು ರೂ.50.00ಲಕ್ಷಗಳ ಅನುದಾನವನ್ನು ಬಿಡುಗಡೆಗೊಳಿಸುವಂತೆ ಪ್ರಸ್ತಾವಿಸಲಾಗಿದೆ.

ವಿಜಯನಗರ ಜಿಲ್ಲಾ ಪಂಚಾಯಿತಿ ಹೊಸದಾಗಿ ಕಾರ್ಯಾರಂಭ ಮಾಡಿದ್ದು ಖಜಾನೆಗಳಲ್ಲಿ ನಿಧಿ ಲೆಕ್ಕಗಳನ್ನು ಸೃಜಿಸಲಾಗಿದ್ದರೂ ಅನುದಾನವನ್ನು ಹಾಗೂ ಲೆಕ್ಕಪತ್ರಗಳನ್ನು ಪ್ರಸಕ್ತ ಸಾಲಿನ ಮಧ್ಯದಲ್ಲಿ ನಿರ್ವಹಿಸಲು ಹಾಗೂ ಅನುದಾನ ಹಂಚಿಕೆಗೊಳಿಸಲು ಸಾಧ್ಯವಿಲ್ಲದ ಕಾರಣ ಪ್ರಸಕ್ತ ಸಾಲಿಗೆ ಮಾತ್ರ ಸೀಮಿತಗೊಳಿಸಿ ಪ್ರಸ್ತಾವಿತ ವೆಚ್ಚವನ್ನು ಈ ಹಿಂದಿನ ಜಿಲ್ಲೆಯಾದ ಬಳ್ಳಾರಿಯಿಂದ ಭರಿಸಲು ನಿರ್ಣಯಿಸಿ ಫೆಬ್ರವರಿ 2022ರವರೆಗಿನ ವೇತನ ವೆಚ್ಚಕ್ಕಾಗಿ ಹಾಗೂ ಮಾರ್ಚ್ 2022ರವರೆಗಿನ ವೈದ್ಯಕೀಯ ವೆಚ್ಚ ಮರುಪಾವತಿ, ವೇತನೇತರ ವೆಚ್ಚ ಹಾಗೂ ಸಂಭಾವನೆಗಾಗಿ ಲೆಕ್ಕ ಶೀರ್ಷಿಕೆ 2515-00-101-0-28-005, 021, 090 ಮತ್ತು 034ರಡಿ ಅನುಕ್ರಮವಾಗಿ ರೂ.20.00ಲಕ್ಷ, ರೂ.10,00ಲಕ್ಷ, ರೂ.40.00ಲಕ್ಷ ಮತ್ತು ರೂ.10.00ಲಕ್ಷ ಒಟ್ಟು ರೂ.80.00ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2515-00-196-1-05-300ರಿಂದ ಬಿಡುಗಡೆಗೊಳಿಸಲು ನಿರ್ಧರಿಸಿ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 611 ವೆಚ್ಚ 6/2021(ಇ) ದಿನಾಂಕ: 5ನೇ ಜನವರಿ 2022

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಅನುಬಂಧದ ಕಾಲಂ 2ರ ಜಿಲ್ಲಾ ಪಂಚಾಯಿತಿಗೆ ಕಾಲಂ 3 ಕಾರ್ಯಕ್ರಮದಡಿ ವೇತನ, ವೈದ್ಯಕೀಯ ವೆಚ್ಚ ಮರುಪಾವತಿ, ವೇತನೇತರ ವೆಚ್ಚ ಹಾಗೂ ಸಂಭಾವನೆಗಾಗಿ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ. 80.00ಲಕ್ಷ (ರೂಪಾಯಿ ಎಂಬತ್ತು ಲಕ್ಷಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

(ಸೂಚನೆ: ಬಿಡುಗಡೆಗೊಳಿಸಿರುವ ಅನುದಾನವನ್ನು ನಿಧಿ-2ಕ್ಕೆ ಜಮೆ ಮಾಡಿಕೊಂಡು, ನಂತರ ಸಂಬಂಧಪಟ್ಟ ಜಿಲ್ಲಾ ಪಂಚಾಯತಿ ಮುಖ್ಯಲೆಕ್ಕಾಧಿಕಾರಿಗಳು ಮರು ಹೊಂದಾಣಿಕೆ ಆದೇಶವನ್ನು ಈ ಕೆಳಗಿನ ಅಧಿಕಾರಿಗಳಿಗೆ ಸುತ್ತೋಲೆರನ್ವಯ ಪ್ರಸ್ತಾವನೆ ಆರ್ಥಿಕ ಇಲಾಖೆಗೆ ಸಲ್ಲಿಸಿ ಖಜಾನೆಯಲ್ಲಿ ಅಪ್ ಲೋಡ್ ಮಾಡಿಕೊಳ್ಳುವುದು. ಲೆಕ್ಕ ಶೀರ್ಷಿಕೆ 2515-00-101-0-26-034 ಮತ್ತು 021ರಡಿ ಬಿಡುಗಡೆಗೊಳಿಸಿರುವ ಅನುದಾನಕ್ಕೆ ಮರು ಹೊಂದಾಣಿಕೆಯ ಅಗತ್ಯವಿರುವುದಿಲ್ಲ)

ಬಳ್ಳಾರಿ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ/ಮುಖ್ಯ ಲೆಕ್ಕಾಧಿಕಾರಿಗಳು ವಿಜಯನಗರ ಜಿಲ್ಲಾ ಪಂಚಾಯಿತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಯವರ ಹುದ್ದೆಗಳನ್ನು HRMS ನಲ್ಲಿ Supernumerary ಹುದ್ದೆಗಳೆಂದು ಸೃಜಿಸಿ ಸದರಿಯವರುಗಳ ವೇತನವನ್ನು ಬಳ್ಳಾರಿ ಜಿಲ್ಲಾ ಪಂಚಾಯಿತಿಯಿಂದ 2021-22ನೇ ಸಾಲಿನ ಆರ್ಥಿಕ ವರ್ಷಾಂತ್ಯದವರೆಗೆ ವೆಚ್ಚ ಭರಿಸತಕ್ಕದ್ದು.

ವಿಜಯನಗರ ಜಿಲ್ಲಾ ಪಂಚಾಯಿತಿಯ ವೈದ್ಯಕೀಯ ವೆಚ್ಚ ಮರುಪಾವತಿ, ವೇತನೇತರ ಮತ್ತು ಸಂಭಾವನೆಗಾಗಿ ಬಿಡುಗಡೆಗೊಳಿಸಿರುವ ಅನುದಾನವನ್ನು ಸದರಿ ಜಿಲ್ಲಾ ಪಂಚಾಯಿತಿಯಿಂದ ಪ್ರಸ್ತಾವನೆ ಸ್ವೀಕೃತಿ ಆಧಾರದ ಮೇಲೆ ಒದಗಿಸಿರುವ ಅನುದಾನಕ್ಕೆ ಸೀಮಿತಗೊಳಿಸಿ ಬಳ್ಳಾರಿ ಜಿಲ್ಲಾ ಪಂಚಾಯಿತಿಯಿಂದ ವೆಚ್ಚ ಭರಿಸತಕ್ಕದ್ದು. ವಿಜಯನಗರ ಜಿಲ್ಲಾ ಪಂಚಾಯಿತಿ 2022-23ನೇ ಸಾಲಿನಿಂದ ಸ್ವತಂತ್ರವಾಗಿ ಲೆಕ್ಕಪತ್ರಗಳನ್ನು ನಿರ್ವಹಿಸತಕ್ಕದ್ದು

ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಕಾರ್ಯನಿರ್ವಾಹಕ ಅಧಿಕಾರಿ/ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು. **ಪ್ರಸ್ತಾವಿತ ಲೆಕ್ಕ ಶೀರ್ಷಿಕೆಯಡಿ ಬಾಕಿ ವೇತನವನ್ನು ಸೆಳೆಯಬೇಕಾಗಿದ್ದಲ್ಲಿ ಅದಕ್ಕೆ ಆರ್ಥಿಕ ಇಲಾಖೆ ಹೊರಡಿಸಿರುವ ಸುತ್ತೋಲೆಯ ಷರತನ್ನು ಸಡಿಲಿಸಿ ಬಾಕಿ ವೇತನವನ್ನು ಸೆಳೆಯಲು ಸಹಮತಿಸಿದೆ ಎಂದು ಭಾವಿಸತಕ್ಕದ್ದು.**

| ಕ್ರ.ಸಂ. | ಜಿಲ್ಲಾ ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಲೆಕ್ಕ ಶೀರ್ಷಿಕೆ 2515–00–196–1–05–300ರಡಿ ಬಿಡುಗಡೆಗೊಳಿಸಿದ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|
| 1 | 2 | 3 | 4 |
| 1 | ಬಳ್ಳಾರಿ | 2515–00–101–0–28–005 | 20.00 |
| | | 2515–00–101–0–28–090 | 40.00 |
| | | 2515–00–101–0–26–021 | 10.00 |
| | | 2515–00–101–0–26–034 | 10.00 |
| | **ಒಟ್ಟು** | 1417778548 | **80.00** |

06/01/22

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್. ಬುಗಟ್ಯಾಗೋಳ)
ವಿಶೇಷಾಧಿಕಾರಿ(ಜಿ.ಪಂ.) ಹಾಗೂ ಪದನಿಮಿತ್ತ
ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

ಇವರಿಗೆ:

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
3. ಆಯುಕ್ತರು, ಖಜಾನೆ ಆಯುಕ್ತಾಲಯ, ಕೆ.ಪಿ.ಸಿ.ಎಲ್. ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಬಳ್ಳಾರಿ/ವಿಜಯನಗರ
5. ಅಪರ ನಿರ್ದೇಶಕರು, ಖಜಾನೆ–2, ಕೆ.ಪಿ.ಸಿ.ಎಲ್. ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು
6. ಜಿಲ್ಲಾ ಖಜಾನಾಧಿಕಾರಿಗಳು, ಬಳ್ಳಾರಿ
7. ರಕ್ಷಾ ಕಡತಕ್ಕೆ
8. ಹೆಚ್ಚುವರಿ ಪ್ರತಿ